ಹಿರಿಯ ಸಿವಿಲ್ ಜಡ್ಜ್‌ಮತ್ತು ಜೆ. ಎಂ. ಎಫ್.ಸಿ., ನ್ಯಾಯಾಲಯ ಚನ್ನಪಟ್ಟಣ
ಚನ್ನಪಟ್ಟಣ.

ಸಿ.ಸಿ. ಸಂಖ್ಯೆಃ 173/2017

ಚಾಸಾಃ 5 ಫ್ರಾಸಾಃ4

| | | |
|---|---|---|
| ಹೆಸರು | : | ರಮೇಶ |
| ಗಂಡನ/ತಂದೆಯ ಹೆಸರು | : | ಪುಟ್ಟರಾಮಯ್ಯ |
| ವಯಸ್ಸು | : | 50 ವರ್ಷ |
| ಉದ್ಯೋಗ | : | ಗ್ರಾಮ ಪಂಚಾಯತಿಯಲ್ಲಿ ಕೆಲಸ |
| ವಾಸ | : | ಬೇವೂರು ಗ್ರಾಮ. |

ದಿನಾಂಕ 01.10.2024 ರಂದು ಸಾಕ್ಷಿಯನ್ನು ಕರೆಸಲಾಯಿತು. ಪ್ರಮಾಣವಚನ ಬೋಧಿಸಲಾಯಿತು.

ಮುಖ್ಯವಿಚಾರಣೆಃ ಮಾನ್ಯ ಎಪಿಪಿ ಯವರಿಂದಃ

ಸುಮಾರು 5 ವರ್ಷಗಳ ಹಿಂದೆ ನಾನು ಬೇವೂರು ಗ್ರಾಮದಲ್ಲಿ ಪಂಚಾಯತಿ ವತಿಯಿಂದ ನೀರು ಬಿಡುವ ಕೆಲಸ ಮಾಡುತ್ತಿದ್ದು, ನೀರು ಬಿಟ್ಟು ದೇವಸ್ಥಾನದ ಬಳಿ ಹೋಗುವಾಗ ಸುಮಾರು 5 ವರ್ಷಗಳ ಹಿಂದೆ ಪೊಲೀಸರು ಈಗ ತೋರಿಸುತ್ತಿರುವ ಬರವಣಿಗೆಯ ಮೇಲೆ ನನ್ನ ಸಹಿಯನು ಪಡೆದಿರುತ್ತಾರೆ. ಸಾಕ್ಷಿಯು ತನ್ನ ಸಹಿ ಗುರುತಿಸಿದ ಬರವಣಿಗೆ ಮಹಜರ್ ಆಗಿದ್ದು ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ನಿಪಿ-2 ರಲ್ಲಿರುವ ವಿಚಾರಗಳು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿಲ್ಲ, ನನ್ನ ಸಮಕ್ಷಮ ಯಾವುದೇ ಮಹಜರ್ ಅನ್ನು ಮಾಡಿಲ್ಲ.ಈಗ ನ್ಯಾಯಾಲಯದ ಮುಂದೆ ಇರುವ ಮು ಮಾ 1 ಮತ್ತು 2 ಅನ್ನು ಇದೇ ಮೊದಲ ಬಾರಿಗೆ ನೋಡುತ್ತಿದ್ದೇನೆ.

(ಈ ಹಂತದಲ್ಲಿ ಸಾಕ್ಷಿಯನ್ನು ಸಂಪೂರ್ಣ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಸ.ಸ.ಅ ರವರು ಅನುಮತಿ ಕೋರಿದ್ದಾರೆ, ಅನುಮತಿಸಲಾಯಿತು).

<u>ಪಾಟೀ ಸವಾಲುಃ ಎಪಿಪಿಯವರಿಂದಃ</u>

ದಿನಾಂಕ *07.11.2016* ರಂದು ಪೋಲಿಸರು ನಮ್ಮ ಗ್ರಾಮಕ್ಕೆ ಬಂದಿದ್ದು, ಅಲ್ಲಿ ನಾನು ಹಾಜರಿದ್ದು, ಅಲ್ಲಿ ಚಾಸಾ*1* ರವರಿಗೆ ತೋರಿಸಿದ ಜಾಗದಲ್ಲಿ ನಾನು ತೋರಿಸಿದ ಘಟನಾ ಸ್ಥಳದಲ್ಲಿ ಚಾಾ-*6* ಮತ್ತು ನನ್ನ ರವರ ಸಮಕ್ಷಮ ಸಂಜೆ *4.00-5.00* ಗಂಟೆಯವರೆಗೆ ನಿಪಿ-*2* ರಂತೆ ಮಹಜರ್ ಕ್ರಮ ಜರುಗಿಸಿ ಚಾಸಾ*1* ರವರು ಹಾಜರುಪಡಿಸಿ ಮು ಮಾ *1* ಮತ್ತು *2* ಅನುನ ವಶಕ್ಕೆ ಪಡೆದು, ನಿಪಿ-*2* ಕ್ಕೆ ಸ್ಥಳದಲ್ಲಿಯೇ ನನ್ನ ಸಹಿಯನು ಪಡೆದಿರುತ್ತಾರೆಂದರೆ ಸರಿಯಲ್ಲ. ನಿಪಿ-*2* ಅನ್ನು ನನ್ನ ಸಮಕ್ಷಮ ಜರುಗಿಸಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿತರು ಪರ ಶ್ರೀ ಎಂ ಆರ್ ಎಸ್ ವಕೀಲರಿಂದಃ</u>

ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)**Na**

ಓ.ಹೇ.ಕೇ.ಸ.ಒ

(ವೆಂಕಟೇಶಪ್ಪ. ವಿ)
ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ.,ಚನ್ನಪಟ್ಟಣ.